ಕಾರ್ಯಾಚರಣೆಯನ್ನು ನಡೆಸಲಾಗುತ್ತಿದೆ. ರಾಜ್ಯದಾದ್ಯಂತ 7318 ಗ್ರಾಮ ಪಂಚಾಯಿತಿ / ವಾರ್ಡ್‌ಗಳಲ್ಲಿ ಗ್ರಾಮ ಸಭೆಗಳನ್ನು ಏರ್ಪಡಿಸಿ, ಸ್ತ್ರೀಶಕ್ತಿ ಸಂಘ, ಯುವಕ ಸಂಘ, ಚುನಾಯಿತ ಪ್ರತಿನಿಧಿಗಳು ಹಾಗೂ ಪ್ರಮುಖರನ್ನು ಒಳಗೊಂಡಂತೆ ತಿಳುವಳಿಕಾ ಕಾರ್ಯಕ್ರಮಗಳನ್ನು ಅನುಷ್ಟಾನಗೊಳಿಸಲಾಗಿದೆ. ಎಲ್ಲಾ ಗ್ರಾಮ ಹಾಗೂ ಪ್ರದೇಶಗಳಲ್ಲಿ ಗಸ್ತು ತಿರುಗಲು 1891 ಬೀಟ್‌ಗಳನ್ನಾಗಿ ವಿಂಗಡಿಸಿ, 16,871 ಪಾಯಿಂಟ್ ಪುಸ್ತಕಗಳನ್ನು ನಿರ್ವಹಿಸಲಾಗಿದೆ. ಸದರಿ ಮಾರ್ಗಗಳಿಗೆ ಕಾರ್ಯ ನಿರ್ವಾಹಕ ಅಧಿಕಾರಿ ಮತ್ತು ಸಿಬ್ಬಂದಿಗಳು ನಿಯಮಿತ ಸಮಯದಲ್ಲಿ ಭೇಟಿ ನೀಡಲು ನಿರ್ದೇಶಿಸಲಾಗಿದೆ. ಹಳೆಯ ಆರೋಪಿಗಳ ಚಲನವಲನಗಳ ಬಗ್ಗೆ ನಿಗಾವಹಿಸಲು ಮತ್ತು ಅವರುಗಳ ಡೋಸಿಯರ್ಸ್‌ಗಳನ್ನು ಸಂಗ್ರಹಿಸಲು ಸೂಚನೆ ನೀಡಲಾಗಿರುತ್ತದೆ. ಅನುಮಾನಾಸ್ಪದ ಸ್ಥಳಗಳ ಮೇಲೆ ಅಬಕಾರಿ ದಾಳಿಗಳನ್ನು ಆಯೋಜಿಸಲು ಸೂಚಿಸಲಾಗಿದೆ. ನಿರಂತರವಾಗಿ ಹಗಲು–ರಾತ್ರಿ ಪಾಳಿಗಳಲ್ಲಿ ರಸ್ತೆ ಗಸ್ತು/ ಕಾವಲು/ ದಾಳಿ ಮತ್ತು ತನಿಖಾ ಕಾರ್ಯಗಳನ್ನು ಕೈಗೊಳ್ಳಲಾಗುತ್ತಿದೆ.

ಸುವರ್ಣ ಗ್ರಾಮದ ಅಭಿವೃದ್ಧಿ ಯೋಜನೆ ಕುರಿತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 126 (435)

ಸದಸ್ಯರ ಹೆಸರು : ಶ್ರೀ ಶಿವಶಂಕರ್ ರೆಡ್ಡಿ. ಎನ್.ಹೆಚ್ (ಗೌರಿಬಿದನೂರು)

ಉತ್ತರಿಸುವ ಸಚಿವರು : ಶ್ರೀ ಜಗದೀಶ್ ಶೆಟ್ಟರ್ (ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಹಾಗೂ ಗ್ರಾಮೀಣ ನೀರು ಸರಬರಾಜು ಮತ್ತು ನೈರ್ಮಲ್ಯ ಸಚಿವರು)

ಪ್ರಶ್ನೆಗಳು:

ಅ) ಪ್ರಸಕ್ತ ಹಣಕಾಸು ವರ್ಷದಲ್ಲಿ ಸುವರ್ಣ ಗ್ರಾಮ ಯೋಜನೆಯನ್ನು ರಾಜ್ಯದಲ್ಲಿ ಜಾರಿಗೆ ತರದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಈ ಯೋಜನೆಯನ್ನು ಸರ್ಕಾರವು ಕೈಬಿಟ್ಟಿದೆಯೇ?

ಉತ್ತರಗಳು:

ಅ) ಸುವರ್ಣ ಗ್ರಾಮೋದಯ ಯೋಜನೆಯು ಪ್ರಸಕ್ತ ಹಣಕಾಸು ವರ್ಷದಲ್ಲಿ ಜಾರಿಯಲ್ಲಿದ್ದು, ಗ್ರಾಮಗಳ ಮುಂದುವರಿದ ಕಾಮಗಾರಿಗಳನ್ನು ಪೂರ್ಣಗೊಳಿಸಲು ಪ್ರಸಕ್ತ ಹಣಕಾಸು ವರ್ಷದಲ್ಲಿ ರೂ. 550.00 ಕೋಟಿ ಅನುದಾನ ಒದಗಿಸಲಾಗಿದೆ.

ಆ) ಇಲ್ಲ.

ಸುವರ್ಣ ಗ್ರಾಮೋದಯ ಯೋಜನೆಯಡಿ ಹಂತ 2, 3 ಮತ್ತು 4 ರಲ್ಲಿ ಆಯ್ಕೆಯಾದ ಗ್ರಾಮಗಳ ಮುಂದುವರಿದ ಕಾಮಗಾರಿಗಳನ್ನು ಪೂರ್ಣಗೊಳಿಸಲು ಮೊದಲ ಆದ್ಯತೆ ನೀಡಲಾಗಿದೆ.

ಶಾಸಕರ ನಿಧಿಯಿಂದ ಪರಿಹಾರಧನ ಮಂಜೂರಾತಿ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	127 (436)
ಸದಸ್ಯರ ಹೆಸರು	:	ಶ್ರೀ ಶಿವಶಂಕರ್ ರೆಡ್ಡಿ. ಎಸ್.ಹೆಚ್ (ಗೌರಿಬಿದನೂರು)
ಉತ್ತರಿಸುವ ಸಚಿವರು	:	ಡಾ. ವಿ.ಎಸ್.ಆಚಾರ್ಯ (ಮಾನ್ಯ ಉನ್ನತ ಶಿಕ್ಷಣ, ಯೋಜನೆ ಮತ್ತು ಸಾಂಖ್ಯಿಕ, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಹಾಗೂ ಮುಜರಾಯಿ ಸಚಿವರು)